# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 490

ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 08.12.2023.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೊಡಗು ಜಿಲ್ಲೆಯಲ್ಲಿನ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಪಿ.ಡಿ.ಓ ಗಳು ಕಾರ್ಯನಿರ್ವಹಿಸುತ್ತಿದ್ದಾರೆಯೇ; | ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ 103. ಗ್ರಾಮ ಪಂಚಾಯತಿಗಳಿಗೆ 103 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 66 ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದು, 37 ಹುದ್ದೆಗಳು ಖಾಲಿ ಇರುತ್ತವೆ. |
| (ಆ) | ನಿಯೋಜನೆ ಅಥವಾ ಪ್ರಭಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪಿ.ಡಿ.ಓ ಗಳ ಸಂಖ್ಯೆ ಎಷ್ಟು; | ನಿಯೋಜನೆ / ಪ್ರಭಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಂಖ್ಯೆ: 38. |
| (ಇ) | ಪ್ರಭಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಿ.ಡಿ.ಓ ಗಳಿಂದ ಗ್ರಾಮ ಅಭಿವೃದ್ಧಿ ನಿಧಾನಗತಿಯಲ್ಲಿ ಸಾಗುತ್ತಿದ್ದು, ನಿಯೋಜನೆಗೊಂಡ ಪಿ.ಡಿ.ಓಗಳಿಗೆ ಕೆಲಸದ ಅಧಿಕ ಒತ್ತಡ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಮುಂದಿನ ಕ್ರಮವೇನು; | ಖಾಲಿ ಇರುವ ಗ್ರಾಮ ಪಂಚಾಯಿತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಸಮೀಪದಲ್ಲಿರುವ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರ ವಹಿಸಲು ನಿರ್ದೇಶನ ನೀಡಲಾಗಿದೆ. |
| (ಈ) | ರಾಜ್ಯದಲ್ಲಿ ಖಾಲಿ ಇರುವ ಪಿ.ಡಿ.ಓ ಹುದ್ದೆಗಳ ಭರ್ತಿಗಾಗಿ ನೇಮಕಾತಿ ನಡೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಗ್ರಾಅಪ 607 ಗ್ರಾಪಂಅ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.